# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 964 |
| ಸದಸ್ಯರ ಹೆಸರು | : | ಶ್ರೀ ಎಂ. ನಾಗರಾಜು (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 27-12-2022 |
| ಉತ್ತರಿಸುವವರು | : | ಮಾನ್ಯ ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ. | ಸರ್ಕಾರವು ಮಹಿಳೆ ಮತ್ತು ಮಕ್ಕಳಲ್ಲಿ ಪ್ರಮುಖವಾಗಿ ಕಂಡು ಬರುತ್ತಿರುವ ಅಪೌಷ್ಟಿಕತೆ ನಿವಾರಿಸಲು ಏನು ಕ್ರಮ ಕೈಗೊಂಡಿದೆ; (ವಿವರವನ್ನು ನೀಡುವುದು) | ಸರ್ಕಾರವು ಮಹಿಳೆ ಮತ್ತು ಮಕ್ಕಳಲ್ಲಿ ಕಂಡು ಬರುತ್ತಿರುವ ಅಪೌಷ್ಟಿಕತೆ ನಿವಾರಿಸಲು ಕೈಗೊಂಡ ಕ್ರಮಗಳು ಈ ಕೆಳಗಿನಂತಿವೆ.<br><br>**<u>ಪೂರಕ ಪೌಷ್ಟಿಕ ಆಹಾರ :</u>**<br><br>ಅಂಗನವಾಡಿ ಕೇಂದ್ರಗಳಲ್ಲಿ ದಾಖಲಾದ 6 ತಿಂಗಳಿಂದ 6 ವರ್ಷದ ಮಕ್ಕಳಿಗೆ ಕೇಂದ್ರ ಸರ್ಕಾರದ ಮಾರ್ಗಸೂಚಿಯಂತೆ 300 ದಿನಗಳ ಪೂರಕ ಪೌಷ್ಟಿಕ ಆಹಾರವನ್ನು ನೀಡಲಾಗುತ್ತಿದೆ.<br><br>• ಎಲ್ಲಾ ಮಕ್ಕಳಿಗೆ ಅಂಗನವಾಡಿ ಕೇಂದ್ರದಲ್ಲಿ ಪ್ರತಿದಿನ ರೂ.8.00 ಮೌಲ್ಯದ ಪೂರಕ ಪೌಷ್ಟಿಕ ಆಹಾರವನ್ನು ನೀಡಲಾಗುತ್ತಿದೆ.<br><br>• ತೀವ್ರ ಅಪೌಷ್ಟಿಕ ಮಕ್ಕಳಿಗೆ ಪ್ರತಿ ದಿನ ರೂ.12.00 ಮೌಲ್ಯದ ಪೂರಕ ಪೌಷ್ಟಿಕ ಆಹಾರವನ್ನು ನೀಡಲಾಗುತ್ತಿದೆ.<br><br>• ಅಂಗನವಾಡಿಗೆ ಹಾಜರಾಗುವ 3 ವರ್ಷದಿಂದ 6 ವರ್ಷದ ಎಲ್ಲಾ ಮಕ್ಕಳಿಗೆ ವಾರದಲ್ಲಿ 2 ದಿನ ಮೊಟ್ಟೆಯನ್ನು ನೀಡಲಾಗುತ್ತಿದೆ.<br><br>• ರಾಜ್ಯ ಸರ್ಕಾರದ ಕ್ಷೀರಭಾಗ್ಯ ಯೋಜನೆಯಡಿ 6 ತಿಂಗಳಿಂದ 6 ವರ್ಷದ ಎಲ್ಲಾ ಅಂಗನವಾಡಿ ಮಕ್ಕಳಿಗೆ ವಾರದಲ್ಲಿ 5 ದಿನ 150 ಮಿ.ಲಿ ಹಾಲನ್ನು (15ಗ್ರಾಂ ಕೆನೆಭರಿತ ಹಾಲಿನಪುಡಿ, 10 ಗ್ರಾಂ ಸಕ್ಕರೆ) ನೀಡಲಾಗುತ್ತಿದೆ.<br><br>• 6 ತಿಂಗಳಿಂದ 3 ವರ್ಷದ ತೀವ್ರ / ಸಾಧಾರಣ ಅಪೌಷ್ಟಿಕ ಮಕ್ಕಳಿಗೆ ವಾರದಲ್ಲಿ 3 ದಿನ ಮೊಟ್ಟೆ ಹಾಗೂ 3 ದಿನ 200 ಎಂ.ಎಲ್ ಹಾಲನ್ನು, ಮೊಟ್ಟೆ ಸ್ವೀಕರಿಸದಿರುವ ಮಕ್ಕಳಿಗೆ ವಾರದಲ್ಲಿ 6 ದಿನ ಹಾಲನ್ನು ನೀಡಲಾಗುತ್ತಿದೆ.<br><br>• 3 ವರ್ಷದಿಂದ 6 ವರ್ಷದ ತೀವ್ರ / ಸಾಧಾರಣ ಅಪೌಷ್ಟಿಕ ಮಕ್ಕಳಿಗೆ ವಾರದಲ್ಲಿ 5 ದಿನ ಮೊಟ್ಟೆ ಹಾಗೂ 3 ದಿನ 200 ಎಂ.ಎಲ್ ಹಾಲನ್ನು, ಮೊಟ್ಟೆ ಸ್ವೀಕರಿಸದಿರುವ ಮಕ್ಕಳಿಗೆ ವಾರದಲ್ಲಿ 6 ದಿನ ಹಾಲನ್ನು ನೀಡಲಾಗುತ್ತಿದೆ. |

| | | |
|---|---|---|
| | | • ತೀವ್ರ ಅಪೌಷ್ಟಿಕ ಮಕ್ಕಳಿಗೆ ಆರೋಗ್ಯ ಇಲಾಖೆಯ ಪೌಷ್ಟಿಕ ಪುನರ್ವಸತಿ ಕೇಂದ್ರ (NRC) ಗಳಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ.<br>• ಆರೋಗ್ಯ ಮತ್ತು ಪೌಷ್ಟಿಕ ಶಿಬಿರಗಳನ್ನು ಏರ್ಪಡಿಸಿ ಅಧಿಕ ಪೌಷ್ಟಿಕತೆಯುಳ್ಳ ಆಹಾರಗಳನ್ನು ತಯಾರಿಸುವ ಕುರಿತು ಮತ್ತು ಮಕ್ಕಳಿಗೆ ಪೌಷ್ಟಿಕತೆಯುಳ್ಳ ಆಹಾರವನ್ನು ನೀಡಲು ತಿಳುವಳಿಕೆ ನೀಡಲಾಗುತ್ತಿದೆ.<br><br>**ಮಾತೃಪೂರ್ಣ ಯೋಜನೆ:**<br><br>ಗರ್ಭಿಣಿ ಮತ್ತು ಬಾಣಂತಿಯರಿಗೆ ಪೌಷ್ಟಿಕಾಂಶಯುಕ್ತ ಮಧ್ಯಾಹ್ನದ ಬಿಸಿಯೂಟವನ್ನು ಅಂಗನವಾಡಿ ಕೇಂದ್ರದಲ್ಲಿಯೇ ನೀಡುವ "ಮಾತೃಪೂರ್ಣ" ಯೋಜನೆಯನ್ನು ಅನುಷ್ಠಾನಗೊಳಿಸಲಾಗಿದೆ.<br>ಈ ಪೂರ್ಣ ಊಟದಲ್ಲಿ ಅನ್ನ, ಸಾಂಬಾರ್, ಪಲ್ಯದ ಜೊತೆಗೆ ಬೇಯಿಸಿದ ಮೊಟ್ಟೆ, 200 ಮಿ.ಲೀ ಹಾಲು ಮತ್ತು ಚಿಕ್ಕಿಯನ್ನು ತಿಂಗಳಿಗೆ ಕನಿಷ್ಠ 25 ದಿನಗಳು ನೀಡಲಾಗುತ್ತಿದೆ.<br><br>ಈ ವರ್ಷದ ಮಳೆಗಾಲ ಮುಗಿಯುವವರೆಗೂ ದಕ್ಷಿಣ ಕನ್ನಡ, ಉತ್ತರ ಕನ್ನಡ, ಉಡುಪಿ, ಕೊಡಗು, ಚಿಕ್ಕಮಗಳೂರು, ಹಾಸನ ಮತ್ತು ಶಿವಮೊಗ್ಗ ಜಿಲ್ಲೆಗಳ ಗುಡ್ಡಗಾಡು ಪ್ರದೇಶಗಳಲ್ಲಿನ ಮಾತೃಪೂರ್ಣ ಯೋಜನೆಯಡಿಯ ಫಲಾನುಭವಿ ಗರ್ಭಿಣಿ ಮತ್ತು ಬಾಣಂತಿಯರಲ್ಲಿ ಯಾರಿಗಾದರೂ ಅಂಗನವಾಡಿ ಕೇಂದ್ರಗಳಿಗೆ ಬಂದು ಹೋಗಲು ಅನಾನುಕೂಲತೆ ಇದ್ದಲ್ಲಿ ಅವರ ಮನವಿಯ ಮೇರೆಗೆ ಕಚ್ಚಾ ಆಹಾರ ಪದಾರ್ಥಗಳನ್ನು (Take Home Ration) ಮನೆಗೆ ತೆಗೆದುಕೊಂಡು ಹೋಗಲು ಅವಕಾಶ ನೀಡಲಾಗಿದೆ.<br><br>ಪ್ರತಿ ಫಲಾನುಭವಿಗೆ ಪ್ರತಿ ದಿನಕ್ಕೆ ರೂ.21/-ರ (ರೂ.9.50/- ಸೇರಿದಂತೆ) ಘಟಕ ವೆಚ್ಚವನ್ನು ನಿಗದಿಪಡಿಸಲಾಗಿದೆ. ಕಬ್ಬಿಣಾಂಶ ಹಾಗೂ ಕ್ಯಾಲ್ಸಿಯಂ ಮಾತ್ರೆ ಸೇವನೆಗೆ ಬೆಂಬಲ ಹಾಗೂ ಪ್ರತಿ ತಿಂಗಳು ಗರ್ಭಿಣಿಯರು ತೂಕವನ್ನು ಪರಿಶೀಲಿಸಲಾಗುತ್ತಿದೆ.<br><br>**ಪ್ರಧಾನಮಂತ್ರಿ ಮಾತೃವಂದನಾ ಯೋಜನೆ (ಪಿ.ಎಂ.ಎಂ.ವಿ.ವೈ)**<br><br>"ಪ್ರಧಾನ ಮಂತ್ರಿ ಮಾತೃವಂದನಾ ಯೋಜನೆ" ಯಡಿ ದಿನಾಂಕ :01.01.2017ರ ನಂತರ ಅಂಗನವಾಡಿ ಕೇಂದ್ರಗಳಲ್ಲಿ ದಾಖಲಾದ ಗರ್ಭಿಣಿ / ಬಾಣಂತಿ ಮಹಿಳೆಯರಿಗೆ ರೂ.5,000/-ಗಳ ಸಹಾಯಧನವನ್ನು ಮೂರು ಕಂತುಗಳಲ್ಲಿ ನೇರ ನಗದು ವರ್ಗಾವಣೆ ಮೂಲಕ ಫಲಾನುಭವಿಯ ಖಾತೆಗೆ ವರ್ಗಾಯಿಸಲಾಗುವುದು. ಸದರಿ ಯೋಜನೆ ಸೌಲಭ್ಯವನ್ನು ಮೊದಲ ಜೀವಂತ ಹೆರಿಗೆಗೆ ಮಾತ್ರ ಸೀಮಿತಗೊಳಿಸಲಾಗಿದೆ. |

| | | |
|---|---|---|
| | | ಪ್ರಸ್ತುತ ಕೇಂದ್ರ ಸರ್ಕಾರದ ಪರಿಷ್ಕೃತ ಮಾರ್ಗಸೂಚಿಯಲ್ಲಿ ಅಂಗನವಾಡಿ ಕೇಂದ್ರಗಳಲ್ಲಿ ನೊಂದಣಿ ಮಾಡಿಸಿದ ಗರ್ಭಿಣಿ / ಬಾಣಂತಿ ಮಹಿಳೆಯರಿಗೆ ರೂ.5,000/- ಗಳ ಸಹಾಯಧನವನ್ನು ಎರಡು ಕಂತುಗಳಲ್ಲಿ ನೇರ ನಗದುವರ್ಗಾವಣೆ ಮೂಲಕ ಫಲಾನುಭವಿಯ ಖಾತೆಗೆ ವರ್ಗಾಯಿಸಲಾಗುವುದು. 2ನೇ ಮಗು ಹೆಣ್ಣು ಮಗುವಾಗಿದ್ದಲ್ಲಿ ಒಂದೇ ಕಂತಿನಲ್ಲಿ ರೂ:6,000/- ಗಳನ್ನು ನೀಡಲು ಅವಕಾಶ ಕಲ್ಪಿಸಲಾಗಿದೆ.<br><br>**<u>ಚುಚ್ಚುಮದ್ದು ಕಾರ್ಯಕ್ರಮ :</u>**<br><br>6 ವರ್ಷದೊಳಗಿನ ಎಲ್ಲಾ ಮಕ್ಕಳಿಗೆ ಮತ್ತು ಗರ್ಭಿಣಿಯರಿಗೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸಹಯೋಗದೊಂದಿಗೆ ನಿಗದಿತ ಚುಚ್ಚುಮದ್ದನ್ನು ನೀಡಲಾಗುತ್ತಿದೆ.<br><br>**<u>ಆರೋಗ್ಯ ತಪಾಸಣೆ :</u>**<br><br>ಅಂಗನವಾಡಿ ಕೇಂದ್ರದಲ್ಲಿ ದಾಖಲಾಗಿರುವ ಎಲ್ಲಾ ಮಕ್ಕಳ ಆರೋಗ್ಯ ತಪಾಸಣೆಯನ್ನು ನಿಯಮಿತವಾಗಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸಹಯೋಗದೊಂದಿಗೆ ನಡೆಸಲಾಗುತ್ತಿದೆ.<br><br>**<u>ಮಾಹಿತಿ ಸೇವೆ :</u>**<br><br>ಅಂಗನವಾಡಿ ಕೇಂದ್ರಗಳಿಗೆ ವೈದ್ಯಾಧಿಕಾರಿಗಳು ಭೇಟಿ ನೀಡಿ ಮಕ್ಕಳ ಆರೋಗ್ಯ ತಪಾಸಣೆ ಮಾಡಿದಾಗ ಹೆಚ್ಚಿನ ತಪಾಸಣೆಗೆ ಅಥವಾ ಚಿಕಿತ್ಸೆಗೆ ತಾಲ್ಲೂಕು ಆರೋಗ್ಯ ಕೇಂದ್ರ / ಜಿಲ್ಲಾ ಆರೋಗ್ಯ ಕೇಂದ್ರಕ್ಕೆ / ಪೌಷ್ಟಿಕ ಪುನರ್ವಸತಿ ಕೇಂದ್ರಗಳಿಗೆ ಕಳುಹಿಸಲು ಸೂಚಿಸುತ್ತಾರೆ. ವೈದ್ಯರು ಸೂಚಿಸಿದಂತೆ ಅಂಗನವಾಡಿ ಕಾರ್ಯಕರ್ತೆಯು ಹೆಚ್ಚಿನ ಚಿಕಿತ್ಸೆ, ತಪಾಸಣೆಗೆ ಮಕ್ಕಳನ್ನು ಕಳುಹಿಸಿಕೊಡುತ್ತಿದೆ. |
| ಆ. | ಮಹಿಳಾ ಆಯೋಗದಲ್ಲಿ ಮಹಿಳೆಯರ ಮೇಲೆ ಎಸಗುತ್ತಿರುವ ದೌರ್ಜನ್ಯ ಪ್ರಕರಣಗಳು ಎಷ್ಟು ದಾಖಲಾಗಿದೆ ಹಾಗೂ ಆಯೋಗದ ವತಿಯಿಂದ ಎಷ್ಟು ಪ್ರಕರಣಗಳು ಇತ್ಯರ್ಥಗೊಂಡಿದೆ, ಇತ್ಯರ್ಥಗೊಳ್ಳದ ಪ್ರಕರಣಗಳ ಬಗ್ಗೆ ತೆಗೆದುಕೊಂಡಿರುವ ಕ್ರಮಗಳಾವುವು? (ವಿವರವನ್ನು ನೀಡುವುದು.) | ಕರ್ನಾಟಕ ರಾಜ್ಯ ಮಹಿಳಾ ಆಯೋಗದಲ್ಲಿ ದಾಖಲಾಗಿರುವ ಮಹಿಳೆಯರ ಮೇಲೆ ಎಸಗುತ್ತಿರುವ ದೌರ್ಜನ್ಯ ಪ್ರಕರಣಗಳನ್ನು ಹಾಗೂ ಇತ್ಯರ್ಥಗೊಂಡ ಪ್ರಕರಣಗಳ ವಿವರಗಳನ್ನು ಅನುಬಂಧದಲ್ಲಿ ಒದಗಿಸಿದೆ.<br><br>ಇತ್ಯರ್ಥಗೊಳ್ಳದ ಪ್ರಕರಣಗಳ ಬಗ್ಗೆ ಆಯೋಗದಲ್ಲಿ ಸಮಾಲೋಚನೆ ನಡೆಸಿ, ಇತ್ಯರ್ಥ ಪಡಿಸಲಾಗುತ್ತದೆ ಹಾಗೂ ಕೆಲವು ಪ್ರಕರಣಗಳ ಬಗ್ಗೆ ಸಂಬಂಧಪಟ್ಟ ಇಲಾಖೆಗೆ ಪತ್ರ ಬರೆದು ವರದಿಯನ್ನು ಪಡೆದು ಮುಂದಿನ ಕ್ರಮವನ್ನು ವಹಿಸಲಾಗುತ್ತದೆ. |

**ಸಂಖ್ಯೆ:ಮಮಇ 372 ಐಸಿಡಿ 2022**

Halappa BA

**(ಆಚಾರ ಹಾಲಪ್ಪ ಬಸಪ್ಪ)**
ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತು
ಮಕ್ಕಳ ಅಭಿವೃದ್ಧಿ ವಿಕಲಚೇತನರ ಹಾಗೂ
ಹಿರಿಯ ನಾಗರೀಕರ ಸಬಲೀಕರಣ ಸಚಿವರು

# ಅನುಬಂಧ

## ಕರ್ನಾಟಕ ರಾಜ್ಯ ಮಹಿಳಾ ಆಯೋಗದಲ್ಲಿ 2020-21, 2021-22 ಮತ್ತು 2022-23ನೇ ಸಾಲಿನಲ್ಲಿ ದೌರ್ಜನ್ಯಕ್ಕೆ ಸಂಬಂಧಪಟ್ಟ ದೂರರ್ಜಿಗಳ ವಿವರ

| ಕ್ರಸಂ. | ಪ್ರಕರಣಗಳ ವಿವರ | 2020-21 | | | 2021-22 | | | 2022-23 ನವೆಂಬರ್-2022 | | |
|---|---|---|---|---|---|---|---|---|---|---|
| | | ಸ್ವೀಕೃತಿ | ಮುಕ್ತಾಯ | ಚಾಲ್ತಿ | ಸ್ವೀಕೃತಿ | ಮುಕ್ತಾಯ | ಚಾಲ್ತಿ | ಸ್ವೀಕೃತಿ | ಮುಕ್ತಾಯ | ಚಾಲ್ತಿ |
| 1 | ಕೌಟುಂಬಿಕ ದೌರ್ಜನ್ಯ | 560 | 217 | 343 | 491 | 142 | 349 | 343 | 47 | 296 |
| 2 | ರಕ್ಷಣೆ | 705 | 484 | 221 | 606 | 311 | 295 | 412 | 131 | 281 |
| 3 | ವರದಕ್ಷಿಣೆ ಕಿರುಕುಳ | 94 | 28 | 66 | 124 | 16 | 108 | 103 | 4 | 99 |
| 4 | ಅತ್ಯಾಚಾರ | 9 | 3 | 6 | 17 | 2 | 15 | 10 | 0 | 10 |
| 5 | ಲೈಂಗಿಕ ಕಿರುಕುಳ | 36 | 12 | 24 | 29 | 7 | 22 | 15 | 1 | 14 |
| 6 | ಕೆಲಸದ ಸ್ಥಳದಲ್ಲಿ ಕಿರುಕುಳ | 100 | 21 | 79 | 104 | 19 | 85 | 54 | 9 | 45 |
| 7 | ಪ್ರೇಮ ಪ್ರಕರಣ | 39 | 10 | 29 | 32 | 12 | 20 | 28 | 1 | 27 |
| 8 | ಸೈಬರ್ ಕ್ರೈಂ | 10 | 3 | 7 | 6 | 1 | 5 | 6 | 0 | 6 |
| **ಒಟ್ಟು** | | **1553** | **778** | **775** | **1409** | **510** | **899** | **971** | **193** | **778** |